ಸಂಪಾದಕ:ಮುರುಗೇಶ ಬಿ.ಶಿವಪೂಜಿ

# ಗಡಿಕನ್ನಡಿಗ

www.gadikannadiga.com

ಪ್ರಾದೇಶಿಕ ದಿನಪತ್ರಿಕೆ

ಬೆಳಗಾವಿ,ಕೊಪ್ಪಳ,ಗದಗ, ವಿಜಯಪುರ, ವಿಜಯನಗರ ಬಳ್ಳಾರಿಗಳಿಂದ ಏಕಕಾಲಕ್ಕೆ ಪ್ರಕಟಿತ

ಸಂಪುಟ:22/ಸಂಚಿಕೆ:132 RNI NO.KAR KAN/2003/10452:No./PMG/KA/NK/BM/743/24-26 ಶನಿವಾರ ದಿನಾಂಕ: 20–04–2024 ಪುಟಗಳು: 6 ಬೆಲೆ:1 ರೂ ☎ 9480498694 / Email-mbshivapuji@gmail.com2


## ಮುನಿರಾಬಾದ್: ಏ.20 ರಂದು ವಿದ್ಯುತ್ ಗ್ರಾಹಕರ ಸಭೆ

ಕೊಪ್ಪಳ, ಏಪ್ರಿಲ್ 19 : ಮುನಿರಾಬಾದ್ ಜೆಸ್ಕಾಂನಿಂದ ವಿದ್ಯುತ್ ಗ್ರಾಹಕರ ಕುಂದು ಕೊರತೆಗಳ ಸಭೆಯನ್ನು ಏಪ್ರಿಲ್ 20 ರಂದು ಬೆಳಗ್ಗೆ 11 ಗಂಟೆಗೆ ಮುನಿರಾಬಾದ್‌ನ ಕಾರ್ಯ ಮತ್ತು ಪಾಲನಾ ವಿಭಾಗ ಕಚೇರಿ ಆವರಣದಲ್ಲಿ ಆಯೋ ಜಿಸಲಾಗಿದೆ.ಮುನಿರಾಬಾದ್ ಉಪ ವಿಭಾಗದ ವ್ಯಾಪ್ತಿಯಲ್ಲಿ ಬರುವ ಎಲ್ಲಾ ವಿದ್ಯುತ್ ಬಳಕೆ ಗ್ರಾಹಕರು ಈ ಸಭೆಗೆ ಹಾಜರಾಗಿ, ತಮ್ಮ ವಿದ್ಯುತ್ ಸಂಬಂಧಿತ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳಬೇಕು ಎಂದು ಮುನಿರಾಬಾದ್ ಜೆಸ್ಕಾಂ ಕಾರ್ಯ ಮತ್ತು ಪಾಲನಾ ಉಪ ವಿಭಾಗದ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಎಫ್‌ಎಸ್‌ಟಿ ತಂಡದ ಅಧಿಕಾರಿಗಳಿಗೆ ನೋಟೀಸ್

ಗದಗ ಏಪ್ರಿಲ್ 19: ಲೋಕಸಭಾ ಸಾರ್ವತ್ರಿಕ ಚುನಾವಣೆ ಸಂಬಂಧ ವಿವಿಧ ವ್ಯಾಪ್ತಿಯ ಎಫ್‌ಎಸ್‌ಟಿ ತಂಡದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗಳು ಚುನಾ ವಣಾ ಆಯೋಗದ ನಿರ್ದೇಶನಗಳನ್ನು ಪಾಲಿಸ ದಿರುವುದು ಕಂಡುಬಂದಿದೆ.

ಈ ಹಿನ್ನೆಲೆ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಚುನಾವಣಾಧಿಕಾರಿ ಅವರು 11 ಅಧಿಕಾರಿಗಳಿಗೆ ನೋಟೀಸ್ ಜಾರಿ ಮಾಡಿದ್ದಾರೆ. ಪ್ರಜಾಪ್ರತಿನಿಧಿ ಕಾಯ್ದೆ 1951 ರ ಕಲಂ 134 ಹಾಗೂ ಕರ್ನಾಟಕ ನಾಗರಿಕ ಸೇವಾ ನಡತೆ ನಿಯಮಗಳು 1966 ರ ಪ್ರಕಾರ ಶಿಸ್ತು ಕ್ರಮ ಜರುಗಿಸಲಾಗುವುದು ಎಂದು ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್. ಅವರು ಎಚ್ಚರಿಕೆ ನೀಡಿದ್ದಾರೆ. ಎಂದು ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್. ಅವರು ಎಚ್ಚರಿಕೆ ನೀಡಿದ್ದಾರೆ.

## ಪ್ರಜಾಪ್ರಭುತ್ವದಲ್ಲಿ ಮತದಾನ ಹಾಗೂ ಚುನಾವಣೆ ಒಂದೇ ನಾಣ್ಯದ ಎರಡು ಮುಖ : ರಾಹುಲ ಶಿಂಧೆ

ಬೆಳಗಾವಿ.ಏ.19 : ಪ್ರಜಾಪ್ರಭುತ್ವದಲ್ಲಿ ಮತದಾನ ಹಾಗೂ ಚುನಾವಣೆ ಒಂದೇ ನಾಣ್ಯದ ಎರಡು ಮುಖಗಳಿದ್ದಂತೆ ತಾವೆಲ್ಲರೂ ಕಡ್ಡಾಯವಾಗಿ ಮತದಾನ ಮಾಡುವ ಮೂಲಕ ಪ್ರಜಾಪ್ರಭುತ್ವ ವ್ಯವಸ್ಥೆಯನ್ನು ಗಟ್ಟಿಗೊಳಿಸುವಂತೆ ಚಿಕ್ಕೋಡಿ ಲೋಕಸಭಾ ಮತಕ್ಷೇತ್ರದ ಚುನಾವಣಾಧಿಕಾರಿ ಹಾಗೂ ಜಿ.ಪಂ. ಸಿ.ಇ.ಓ ರಾಹುಲ ಶಿಂಧೆ ಹೇಳಿದರು.

ಚಿಕ್ಕೋಡಿ ತಾ.ಪಂ ಆವರಣದಲ್ಲಿ ಶುಕ್ರವಾರ (ಎ.19) ರಂದು ಮತದಾನ ಜಾಗೃತಿ ಕುರಿತು ಆಯೋಜಿಸಲಾಗಿದ್ದ ಎತ್ತಿನ ಬಂಡಿ ಜಾಥಾಗೆ ಚಾಲನೆ ನೀಡಿ ಅವರು ಮಾತನಾಡಿದರು.

ಮೇ 7 ರಂದು ಲೋಕಸಭಾ ಸಾರ್ವತ್ರಿಕ ಚುನಾವಣೆಗೆ ಮತದಾನ ನಡೆಯುತ್ತಿದೆ. ಮತದಾನದ ದಿನದಂದು ಪ್ರತಿಯೊಬ್ಬರು ತಪ್ಪದೆ ಮತದಾನ ಮಾಡುವ ಮೂಲಕ ಪ್ರಜಾಪ್ರಭುತ್ವ ವ್ಯವಸ್ಥೆಯನ್ನು ಗಟ್ಟಿಗೊಳಸಬೇಕು ಎಂದರು. ಮತದಾನ ಎಂಬುವದು ಸಂವಿಧಾನ ನೀಡಿದ ವರದಾನವಾಗಿದ್ದು ಇಂತಹ ಅತ್ಯಮೂಲ್ಯವಾದ ಹಕ್ಕನ್ನು ತಪ್ಪದೇ ಚಲಾಯಿಸುವುದು ಪ್ರತಿಯೊಬ್ಬ ಅರ್ಹ ಮತದಾರರ ಜವಾಬ್ದಾರಿಯಾಗಿದೆ. ಪ್ರಜಾಪ್ರಭುತ್ವ ಗಟ್ಟಿಗೊಳ್ಳಬೇಕಾದರೆ ಎಲ್ಲರೂ ತಪ್ಪದೇ ಮತ ಚಲಾಯಿಸಬೇಕು. ಸ್ವಯಂ ಪ್ರೇರಣೆಯಿಂದ ಅರ್ಹ ಮತದಾರರು ಮತ ಚಲಾಯಿಸುವದರ ಜೊತೆಗೆ ತಮ್ಮ ನೆರೆಹೊರೆಯವರು ಸಹ ತಪ್ಪದೇ ಮತದಾನ ಮಾಡುವಂತೆ ಜಾಗೃತಿ ಮೂಡಿಸಲು ಮುಂದಾಗುವಂತೆ ಜಿ.ಪಂ.ಸಿ.ಇ.ಓ. ರಾಹುಲ ಶಿಂಧೆ ಕರೇ ನೀಡಿದರು.

ಜಾಥಾ ಕಾರ್ಯಕ್ರಮವು ತಾಲ್ಲೂಕ ಪಂಚಾಯತ ಕಚೆರಿಯಿಂದ ಪ್ರಾರಂಭವಾಗಿ ಬಸವೇಶ್ವರ ಸರ್ಕಲ್ ಇಂದ ಬಸ ನಲ್ದಾಣ ಸರ್ಕಲ ಸುತ್ತಾಡಿ ತಾಲ್ಲೂಕ ಪಂಚಾಯತಿ ಮುಂದೆ ಕಾರ್ಯಕ್ರಮವು ಮುಕಾಯಗೊಳಿಸಲಾಯಿತು. ಚಿಕ್ಕೋಡಿ ತಾಲ್ಲುಕಿನ ಸುತ್ತಮುತ್ತಲಿನ ರೈತರು ಚಕ್ಕಡಿ ಬಂಡೆಯೊಂದಿಗೆ ಭಾಗಿಯಾಗಿದ್ದರು.

ಅಲ್ಲದೇ ಸಾಂಪ್ರದಾಯಿಕ ಉಡುಗೆಯೊಂದಿಗೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಕಾರ್ಯಕರ್ತರು, ಎಸ್.ಎಚ್.ಜಿ ಸದಸ್ಯರು, ತಾಲ್ಲೂಕಾ ಪಂಚಾಯತ ಸಿಬ್ಬಂದಿ, ಪುರಸಭೆ ಸಿಬ್ಬಂದಿಗಳು ಭಾಗಿ ರಸ್ತೆ ಉದ್ದಕ್ಕು ಚುನಾವಣೆ ಘೋಷಣೆ ಕೂಗುತ್ತಾ, ಬಿದಿ ವ್ಯಾಪಾರಿಗಳಿಗೆ ಕರ ಪತ್ರವನ್ನು ಹಂಚುತ್ತಾ ಮತದಾನದ ಕುರಿತು ಜಾಗೃತಿ ಮೂಡಿಸಲಾಯಿತು.

ಈ ಸಂದರ್ಭದಲ್ಲಿ ಚಿಕ್ಕೋಡಿ ಉಪವಿಭಾಗಾಧಿಕಾರಿ ಮೆಹಬೂಬಿ, ಜಿ.ಪಂ ಯೋಜನಾ ನಿರ್ದೇಶಕ ಡಾ: ಎಮ್ ಕೃಷ್ಣರಾಜು, ಚಿಕ್ಕೋಡಿ ತಹಶೀಲ್ದಾರ ಚಿದಂಬರ ಕುಲಕರ್ಣಿ, ಜಿ.ಪಂ ಲೆಕ್ಕಾಧಿಕಾರಿ ಗಂಗಾ ಹಿರೇಮಠ, ಚಿಕ್ಕೋಡಿ ತಾ.ಪಂ.ಇ.ಓ.ಜಗದೀಶ ಪೂಜಾರ ಸೇರಿದಂತೆ ವಿವಿಧ ಇಲಾಖೆ ಪುರಸಭೆಯ ಮುಖ್ಯಾಧಿಕಾರಿ ಮಹಾಂತೇಶ ನಡವಣೆ ಹಾಗೂ ವಿವಿಧ ಇಲಾಖೆಯ ಸಿಬ್ಬಂದಿಗಳು ಉಪಸ್ಥಿತರಿದ್ದರು.

## ಚಿಕ್ಕೋಡಿ ಲೋಕಸಭಾ ಮತಕ್ಷೇತ್ರ 20 ಅಭ್ಯರ್ಥಿಗಳಿಂದ 27 ನಾಮಪತ್ರ ಸಲ್ಲಿಕೆ

ಬೆಳಗಾವಿ,ಏ.19 : ಲೋಕಸಭಾ ಸಾರ್ವತ್ರಿಕ ಚುನಾವಣೆ–2024ಕ್ಕೆ ಸಂಬಂಧಿಸಿದಂತೆ ಚಿಕ್ಕೋಡಿ ಲೋಕಸಭಾ ಮತಕ್ಷೇತ್ರಕ್ಕೆ ಏ.12 ರಿಂದ 19 ರ ವರೆಗೆ 20 ಅಭ್ಯರ್ಥಿಗಳಿಂದ 27 ಉಮೇದುವಾರಿಕೆಗಳು ಸ್ವೀಕೃತವಾಗಿರುತ್ತವೆ.

ನಾಮಪತ್ರ ಸಲ್ಲಿಸಿದವರ ವಿವರ: ಭಾರತೀಯ ಜನತಾ ಪಾರ್ಟಿಯಿಂದ ಅಣ್ಣಾಸಾಹೇಬ.ಎಸ್.ಜೊಲ್ಲೆ–2, ಕಾಂಗ್ರೇಸ್ ಪಕ್ಷದ ಅಭ್ಯರ್ಥಿ ಪ್ರಿಯಾಂಕಾ ಜಾರಕಿಹೊಳಿ–4, ಅಖಿಲ ಭಾರತ ಹಿಂದೂ ಮಹಾಸಭಾ ಪಕ್ಷದಿಂದ ಕಾಡಯ್ಯ ಶಂಕರಯ್ಯ ಹಿರೇಮಠ–1,

ಕರ್ನಾಟಕ ರಾಷ್ಟೊ ಸಮಿತಿ ಪಕ್ಷದಿಂದ ಕುಮಾರ ಡೊಂಗರೆ–1, ಸರ್ವ ಜನತಾ ಪಾರ್ಟಿ ಪಕ್ಷದಿಂದ ಅಪ್ಪಾಸಾಹೇಬ ಕುರಣೆ–2,ಬಹುಜನ ಭಾರತ ಪಾರ್ಟಿಯಿಂದ ಪವನಕುಮಾರ ಬಾಬುರಾವ ಮಾಳಗೆ–1, ಭಾರತೀಯ ಜವಾನ ಕಿಸಾನ ಪಾರ್ಟಿಯಿಂದ ಸತ್ಯಪ್ಪ ದಶರಥ ಕಾಳೇಲಿ–1,

(2 ನೇ ಪುಟಕ್ಕೆ)

## ಕಾಮಗಾರಿ ಸ್ಥಳದಲ್ಲಿ ಕೂಲಿಕಾರರಿಗೆ ಮತದಾನ ಜಾಗೃತಿ

### ಆಸೆ ಆಮಿಷಗಳಿಗೆ ಒಳಗಾಗದೇ ಮತ ಚಲಾಯಿಸಿ : ತಾ.ಪಂ ಇಓ ಕರೆ




ಕೊಪ್ಪಳ, ಏಪ್ರಿಲ್ 19 : ಆಸೆ ಆಮಿಷಗಳಿಗೆ ಒಳಗಾಗದೇ ಪ್ರತಿಯೊಬ್ಬರೂ ಕಡ್ಡಾಯವಾಗಿ ಮತವನ್ನು ಚಲಾಯಿಸುವಂತೆ ಕೂಲಿಕಾರರಿಗೆ ಕನಕಗಿರಿ ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿಗಳು ಹೇಳಿದರು. ಕನಕಗಿರಿ ತಾಲೂಕಿನ ಜೀರಾಳ ಗ್ರಾ.ಪಂ ವತಿಯಿಂದ ಗ್ರಾಮದ ಕೂಲಿಕಾರರಿಗೆ ನೀಡಲಾಗಿದ್ದ ನಾಲಾ ಹೂಳೆತ್ತುವ ಕಾಮಗಾರಿ ಸ್ಥಳದಲ್ಲಿ ಶುಕ್ರವಾರದಂದು ತಾಲೂಕು ಸ್ವೀಪ್ ಸಮಿತಿ ವತಿಯಿಂದ ಹಮ್ಮಿಕೊಂಡಿದ್ದ ಮತದಾನ ಜಾಗೃತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.ಪ್ರಪಂಚದಲ್ಲಿಯೇ ಅತಿ ದೊಡ್ಡ ಪ್ರಜಾಪ್ರಭುತ್ವ ರಾಷ್ಟ್ರವಾದ ನಮ್ಮ ದೇಶದಲ್ಲಿ ಸಂವಿಧಾನ ನಮ್ಮೆಲ್ಲರಿಗೂ ನೀಡಿರುವ ಒಂದು ಹಕ್ಕು ಮತದಾನ. ಅದನ್ನು ಎಲ್ಲರೂ ಯಾವುದೇ ಆಸೆ ಆಮಿಷಗಳಿಗೆ ಒಳಗಾಗದೇ ಮತದಾನ ಮಾಡಬೇಕು ಎಂದರು.ನಂತರ ಸಹಾಯಕ ನಿರ್ದೇಶಕರು ಮಾತನಾಡಿ, ಬೇಸಿಗೆ ಇರುವುದರಿಂದ ಯಾರು ಗುಳೆ ಹೋಗದೇ, ನಮ್ಮೂರಲ್ಲೇ ನರೇಗಾ ಯೋಜನೆಯಡಿ ಕೆಲಸ ಮಾಡುವ ಮೂಲಕ ಯೋಜನೆಯ ಸದುಪಯೋಗ ಪಡೆಯಲು ತಿಳಿಸಿದರು. ಜೊತೆಗೆ ಸಮುದಾಯ ಕಾಮಗಾರಿಯಷ್ಟೇ ಅಲ್ಲದೇ, ವೈಯಕ್ತಿಕ ಕಾಮಗಾರಿಗಳ ಪ್ರಯೋಜನ ಪಡೆಯಲು ತಿಳಿಸಿದರು. ಬಳಿಕ ಗ್ರಾ.ಪಂ ಪಿಡಿಓ ರವರು ಕೂಲಿಕಾರರಿಗೆ ಮತದಾರರ ಪ್ರತಿಜ್ಞಾ ವಿಧಿಯನ್ನು ಬೋಧಿಸಿದರು. ಈ ವೇಳೆ ತಾಲೂಕು ಐಇಸಿ ಸಂಯೋಜಕರು, ಬಿಎಫ್.ಟಿ ಸೇರಿದಂತೆ ಗ್ರಾ.ಪಂ ಸಿಬ್ಬಂದಿ ಹಾಗೂ ಕೂಲಿಕಾರರು ಹಾಜರಿದ್ದರು.

## ಮುನವಳ್ಳಿ ಊರಿಗೆ ಕೆಟ್ಟ ಹೆಸರು ತಂದ ನೇಹಾ ಕೊಲೆಗಾರನಿಗೆ ಕಠಿಣ ಶಿಕ್ಷೆ ನೀಡುವಂತೆ ರಸ್ತೆ ತಡೆ




ಬೆಳಗಾವಿ.: ಹುಬ್ಬಳ್ಳಿಯಲ್ಲಿ ವಿಧ್ಯಾರ್ಥಿನ ನೇಹಾ ಕೊಲೆ ಪ್ರಕರಣಕ್ಕೆ ಆಕ್ರೋಶ ವ್ಯಕ್ತಪಡಿಸಿ ಹಂತಕನ ಊರು ಸವದತ್ತಿ ತಾಲೂಕಿನ ಮುನವಳ್ಳಿಯಲ್ಲಿ ಸರ್ವಧರ್ಮ ಭಾಂದವರು ಸಾವಿರಾರು ಸಂಖ್ಯೆಯಲ್ಲಿ ಸೇರಿ ರಸ್ತೆ ತಡೆ ನಡೆಸಿ ಪ್ರತಿಭಟನೆ ನಡೆಸಿದರು.ವಿಧ್ಯಾರ್ಥಿನ ನೇಹಾ ಚಾಕೂ ಇರಿತ ಪ್ರಕರಣ ವಿರೋಧಿಸಿ ಹಿಂದೂ– ಮುಸ್ಲಿಂ ಬಾಂಧವರು ಇಡೀ ಮುನವಳ್ಳಿ ಪಟ್ಟಣ ಬಂದ್ ಮಾಡಿದರು. ವ್ಯಾಪಾರಿಗಳು, ಶಾಲಾ ಕಾಲೇಜುಗಳು ಸ್ವಯಂ ಪ್ರೇರಿತ ಬಂದ್ ಮಾಡಿದ್ದರಿಂದ ಮುನವಳ್ಳಿ ಪಟ್ಟಣ ಬಿಕೋ ಎನ್ನುತ್ತಿತ್ತು.ರಾಜಕೀಯ ಪ್ರಚಾರದ ಮುಖಂಡರು ಸಹ ಇತ್ತ ಸುಳಿಯಲಿಲ್ಲ. ಮುನವಳ್ಳಿ ಪಟ್ಟಣಕ್ಕೆ ಕೆಟ್ಟ ಹೆಸರು ತಂದಿರುವ ಹಂತಕ ಯುವಕನಗೆ ಕಠಿಣ ಶಿಕ್ಷೆ ಆಗಬೇಕು ಎಂದು ಆಕ್ರೋಶ ವ್ಯಕ್ತಪಡಿಸಿದರು.

## ನೇಹಾ ಹಿರೇಮಠ ಕೊಲೆ ಪ್ರಕರಣ ಖಂಡಿಸಿ ಎಬಿವಿಪಿ ಪ್ರತಿಭಟನೆ




ಬೆಳಗಾವಿ.ಹುಬ್ಬಳ್ಳಿಯ ಬಿವಿಬಿ ಕಾಲೇಜಿನ ವಿದ್ಯಾರ್ಥಿನಿ ನೇಹಾ ನಿರಂ ಜನಯ್ಯ ಹಿರೇಮಠ ಲವ್ ಜೀ ಹಾದಿಯ ಕಾರಣಕ್ಕಾಗಿ ಫಯಾಜ್ ಎಂಬಾತ ಭೀಕರ ಹತ್ಯೆ ಮಾಡಿರುವುದನ್ನು ಖಂಡಿಸಿ ಶುಕ್ರ ವಾರ ಎಬಿವಿಪಿ ಕಾರ್ಯ ಕರ್ತರು ಪ್ರತಿಭಟನೆ ನಡೆಸಿ ಸರಕಾರದ ವಿರುದ್ಧ ಧಿಕ್ಕಾರ ಕೂಗಿ ಆಕ್ರೋಶ ವ್ಯಕ್ತಪಡಿಸಿದರು.ಶಾಲಾ, ಕಾಲೇ ಜುಗಳು ಜ್ಞಾನದ ದೇಗುಲಗಳು. ಇಂಥ ದೇಗುಲದಲ್ಲಿ ಹಾಡ ಹಗಲೇ ವಿದ್ಯಾರ್ಥಿನಿ ನೇಹಾ ಹಿರೇಮಠನನ್ನು ಭೀಕರವಾಗಿ ಹತ್ಯೆ

(2 ನೇ ಪುಟಕ್ಕೆ)

## ಫಯಾಜ್‌ನಿಗೆ ಗಲ್ಲು ಶಿಕ್ಷೆ ನೀಡುವಂತೆ ಆಗ್ರಹ



ಇತ್ತೀಚೆಗೆ ರಾಜ್ಯದಲ್ಲಿ ನೂರಾರು ಪ್ರೀತಿ ಪ್ರೇಮಗಳ ನೆಪಗಳ ಸುತ್ತ ಹತ್ಯೆಗಳು, ಆಸಿಡ್ ದಾಳಿಗಳು ನಮ್ಮ ನಡುವೆ ನಡೆಯುತ್ತಲೇ ಇವೆ. ಈ ಕೃತ್ಯಗಳು ಅಮಾನವೀಯ ಹಾಗು ಶಿಕ್ಷಾರ್ಹ. ಇಂತಹ ಘಟನೆಗಳು ನಡೆದಿವೆ ಆದರು ಮಹಿಳೆಯರ ವಿಚಾರದಲ್ಲಿ ರಾಜ್ಯ ಸರ್ಕಾರ ಕಣ್ಣು ಮುಚ್ಚಿಕೊಂಡು ಕುಳಿತ್ತಿದ್ದೆ.

ಈರಣ್ಣಾ ಕಡಾಡಿ, ಸಂಸದರು, ಬೆಳಗಾವಿ

ಯರಗಟ್ಟಿ: ಹುಬ್ಬಳ್ಳಿಯಲ್ಲಿ ನಿನ್ನೆ ನೇಹಾ ಎಂಬ ಯುವತಿಯನ್ನು ಭೀಕರ ಕೊಲೆ ಮಾಡಿದ ಫಯಾಜನಿಗೆ ಗಲ್ಲು ಶಿಕ್ಷೆ ನೀಡುವಂತೆ ಆಗ್ರಹಿಸಿ ಸಮೀಪದ ಮುನವಳ್ಳಿಯ ಪಂಚಲಿಂಗೇಶ್ವರ ಸರ್ಕಲ್ ಜೆಲ್ಲಿ ಬೃಹತ್ ಪ್ರತಿಭಟನೆ ನಡೆಯಿತು. ಫಯಾಜ್, ಮುನವಳ್ಳಿಯ ಹೆಸರಿಗೆ ಕಪ್ಪು ಮಸಿ ಬಳೆದಿದ್ದಾನೆ. ಯಾರ ಮಗುವಾದರು ಅಷ್ಟೇ. ನೇಹಾಳ ಕೊಲೆ ಮುನವಳ್ಳಿಯ ಜನತೆಯ ಹೃದಯ ಘಾಸಿಗೊಳಿಸಿದೆ ಎಂದು ಕಂಬನಿ ಮಿಡಿದಿದ್ದಾರೆ.

ಫಯಾಜ್ ನಿಗೆ ಗಲ್ಲು ಶಿಕ್ಷೆ ನೀಡುವಂತೆ ಆಗ್ರಹಿಸಿ ಮುನವಳ್ಳಿಯ ಹಿಂದೂ ಮುಸ್ಲಿಮ್ ಧರ್ಮಿಯರು ಬೃಹತ್ ಪ್ರತಿಭಟನೆ ನಡೆಸಿ, ಆಕ್ರೋಶ ವ್ಯಕ್ತಪಡಿಸಿದರು.ಪ್ರತಿಭಟನೆ ಸ್ಥಳಕ್ಕೆ ಭೇಟಿ ನೀಡಿದ ಶಾಸಕ ವಿಶ್ವಾಸ ವೈದ್ಯ ಮಾತನಾಡಿದರು ನಾನು ಒಬ್ಬ ಹೆಣ್ಣುಮಗಳ ತಂದೆಯಾಗಿ ತೀವ್ರವಾಗಿ ಖಂಡಿಸುತ್ತೇನೆ. ನನಗೂ ಓರ್ವ ಹೆಣ್ಣು ಮಗಳಿದ್ದು ಇಂಥ ಘಟನೆಗಳನ್ನು ನಾನು ಸಹಿಸಲ್ಲ. ಹುಬ್ಬಳ್ಳಿಯ ಬಿವಿಬಿ ಕಾಲೇಜಿನಲ್ಲಿ ನಡೆದ ಮಹಾನಗರ ಪಾಲಿಕೆ ಸದಸ್ಯರು ಆದ ನಿರಂಜನ ಹಿರೇಮಠ ಅವರ ಪುತ್ರಿಯ ಕೊಲೆ ನನಗೆ ಆಘಾತ ತರಸಿದ್ದು,ಅವರ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳಲಿ, ಅವರಗೆ ಕಠಿಣ ಕಾನೂನು ಕ್ರಮ ಕೈಗೊಂಡು ಅವರಿಗೆ ತಕ್ಕ ಪಾಠ ಕಲಿಸಬೇಕು.

ಆ ಯುವತಿಯ ಕುಟುಂಬಕ್ಕೆ ನ್ಯಾಯ ಸಿಗಲಿ, ಈ ತರಹದ ಅನ್ಯಾಯಕ್ಕೆ ತಪ್ಪಿಸ್ತರ ವಿರುದ್ಧ ಕ್ರಮ ಕೈಗೊಳ್ಳಲು ನಮ್ಮ ಸರಕಾರ ಬದ್ಧವಾಗಿದೆ ಎಂದು ಹೇಳಿದರು.

## ಲೋಕಸಭಾ ಚುನಾವಣೆ: ಪೊಲೀಸ್ ವೀಕ್ಷಕರಿಂದ ಸಭೆ

### ಚುನಾವಣಾ ಅಕ್ರಮ ತಡೆಗೆ ಸಮರ್ಪಕವಾಗಿ ಕಾರ್ಯ ನಿರ್ವಹಿಸಿ: ಡಾ.ಸತೀಶ ಪಾಟೀಲ್



ಕೊಪ್ಪಳ, ಏಪ್ರಿಲ್ 19 : ಚುನಾವಣಾ ಕರ್ತವ್ಯ ನಿಯೋಜಿತ ಅಧಿಕಾರಿ, ಸಿಬ್ಬಂದಿಗಳು ಎಚ್ಚರಿಕೆ ಯಿಂದಿ ದ್ದು, ಚುನಾವಣಾ ಅಕ್ರಮ ತಡೆಗೆ ಸಮರ್ಪ ಕವಾಗಿ ಕಾರ್ಯ ನಿರ್ವಹಿಸಿ ಎಂದು ಚುನಾವಣಾ ಪೊಲೀಸ್ ವೀಕ್ಷಕರಾದ ಡಾ.ಸತೀಶ ಪಾಟೀಲ್ ಅವರು ಸೂಚನೆ ನೀಡಿದರು.ಲೋಕಸಭಾ ಚುನಾವಣೆ–2024ರ ಹಿನ್ನೆಲೆ ಮಾದರಿ ನೀತಿ ಸಂಹಿತೆ ಜಾರಿಯ ಕುರಿತು ರಾಯಚೂರು ಮತ್ತು ಕೊಪ್ಪಳ ಲೋಕಸಭಾ ಕ್ಷೇತ್ರಗಳ ಚುನಾವಣಾ ಪೊಲೀಸ್ ವೀಕ್ಷಕರಾದ ಡಾ.ಸತೀಶ ಪಾಟೀಲ್ ಐಪಿಎಸ್ ಅವರು ಕೊಪ್ಪಳ ಚುನಾವಣಾಧಿಕಾರಿಗಳ ಹಾಗೂ ಜಿಲ್ಲಾ ಚುನಾವಣಾಧಿಕಾರಿಗಳ ಸಮ್ಮುಖದಲ್ಲಿ ನಗರದ ಪ್ರವಾಸಿ ಮಂದಿರದ ಸಭಾಂಗಣದಲ್ಲಿ ಗುರುವಾರ ಪೊಲೀಸ್ ಇಲಾಖೆ ಅಧಿಕಾರಿಗಳೊಂದಿಗೆ ಸಭೆ ನಡೆಸಿ ಮಾತನಾಡಿದರು. ಪ್ರಸಕ್ತ ಲೋಕಸಭಾ ಚುನಾವಣೆ–2024ರ ಹಿನ್ನೆಲೆಯಲ್ಲಿ ಮಾದರಿ ನೀತಿ ಸಂಹಿತೆ ಜಾರಿಯಲ್ಲಿದ್ದು, ಚುನಾವಣಾ ಅಕ್ರಮ ತಡೆಗೆ ಸಮರ್ಪಕವಾಗಿ ಕಾರ್ಯ ನಿರ್ವಹಿಸಬೇಕು. ಈ ಹಿನ್ನೆಲೆಯಲ್ಲಿ ಚುನಾವಣಾ ಕರ್ತವ್ಯಕ್ಕೆ ನೇಮಕಗೊಂಡ ಪೊಲೀಸ್ ಅಧಿಕಾರಿಗಳು ಹಾಗೂ ಸಿಬ್ಬಂದಿಗಳು ಫ್ಲೈಯಿಂಗ್ ಸ್ಕ್ವಾಡ್, ವಿಡಿಯೋ ಸರ್ವೆಲೆನ್ಸ್ ತಂಡ, ಎಸ್.ಎಸ್.ಟಿ ತಂಡಗಳು ಹಾಗೂ ಇತರ ಚುನಾವಣಾ ತಂಡಗಳೊಂದಿಗೆ ಸಹಕಾರದೊಂದಿಗೆ ಸೂಕ್ತ ಕಾರ್ಯಾಚರಣೆ ಕೈಗೊಂಡು, ಅಕ್ರಮ ಪತ್ತೆ ಹಚ್ಚಿ, ಪ್ರಕರಣ ದಾಖಲಿಸಬೇಕು ಎಂದು ಸೂಚನೆ ನೀಡಿದರು.

ಜಿಲ್ಲಾ ಚುನಾವಣಾಧಿಕಾರಿಗಳು ಹಾಗೂ ಜಿಲ್ಲಾಧಿಕಾರಿಗಳಾದ ನಲಿನ್ ಅತುಲ್ ಅವರು ಮಾತನಾಡಿ, ಪ್ರಸಕ್ತ ಲೋಕಸಭಾ ಚುನಾವಣೆ ನಿಮಿತ್ಯ ಜಿಲ್ಲೆಯಾದ್ಯಂತ ಚುನಾವಣಾ ಅಕ್ರಮಗಳನ್ನು ತಡೆಗಟ್ಟುವ ನಿಟ್ಟಿನಲ್ಲಿ ಹಾಗೂ ಚುನಾವಣಾ ಮಾದರಿ ನೀತಿ ಸಂಹಿತೆಯ ಸಮರ್ಪಕ ಜಾರಿಗೆ ಎಲ್ಲಾ ತಂಡಗಳು ಕಾರ್ಯನಿರತವಾಗಿವೆ ಎಂದು ಹೇಳಿದರು.

ಸಭೆಯಲ್ಲಿ ಎಂ.ಸಿ.ಸಿ ನೋಡಲ್ ಅಧಿಕಾರಿಗಳು ಹಾಗೂ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ರಾಹುಲ್ ರತ್ನಂ ಪಾಂಡೆಯ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಯಶೋಧಾ ವಂಟಗೋಡಿ, ಅಪರ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಹೇಮಂತ ಕುಮಾರ, ಕೊಪ್ಪಳ ಡಿವೈಎಸ್ಪಿ ಮುತ್ತಣ್ಣ ಸವರಗೊಳ, ಗಂಗಾವತಿ ಡಿವೈಎಸ್ಪಿ ಸಿದ್ದನಗೌಡ ಪಾಟೀಲ್, ಡಿ.ಆರ್.ಡಿ.ಎಸ್.ಪಿ ನಂಗಪ್ಪ ಸೇರಿದಂತೆ ವಿಧಾನಸಭಾ ಕ್ಷೇತ್ರಗಳ ಪೊಲೀಸ್ ಇಲಾಖೆಯ ನೋಡಲ್ ಅಧಿಕಾರಿಗಳು ಹಾಗೂ ಇತರ ಪೊಲೀಸ್ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು.

## ಲೋಕಸಭಾ ಚುನಾವಣೆ: ಚಿಕ್ಕೋಡಿ ಲೋಕಸಭಾ ಮತಕ್ಷೇತ್ರಕ್ಕೆ ಸಾಮಾನ್ಯ ವೀಕ್ಷಕರ,ಪೋಲಿಸ ವೀಕ್ಷಕರ ಆಗಮನ, ಸಾರ್ವಜನಿಕ ಭೇಟಿಗೆ ಲಭ್ಯ

ಬೆಳಗಾವಿ.ಏ.19: ಲೋಕಸಭಾ ಚುನಾವಣೆ–2024 ರ ಹಿನ್ನೆಲೆಯಲ್ಲಿ 01–ಚಿಕ್ಕೋಡಿ ಲೋಕಸಭಾ ಕ್ಷೇತ್ರಕ್ಕೆ ಚುನಾವಣಾ ಆಯೋಗವು ನಿಯೋಜಿಸಿರುವ ಸಾಮಾನ್ಯ ವೀಕ್ಷಕರು ಹಾಗೂ ಪೋಲಿಸ ವೀಕ್ಷಕರು ಆಗಮಿಸಿದ್ದು, ಸಾರ್ವಜನಿಕರ ಭೇಟಿಗೆ ಲಭ್ಯವಿರುತ್ತಾರೆ ಎಂದು ಜಿಲ್ಲಾ ಚುನಾವಣಾಧಿಕಾರಿ ನಿತೇಶ್ ಪಾಟೀಲ ಅವರು ತಿಳಿಸಿದ್ದಾರೆ.

01–ಚಿಕ್ಕೋಡಿ ಲೋಕಸಭಾ ಕ್ಷೇತ್ರ ಸಾಮಾನ್ಯ ವೀಕ್ಷಕರು:

ಜಿ.ಎಸ್.ಪಾಂಡಾ ದಾಸ್(ಐ.ಎ.ಎಸ್), ಮೊಬೈಲ್ ಸಂಖ್ಯೆ–7349611395; ನಿಪ್ಪಾಣಿ, ಪಿಡಬ್ಲ್ಯುಡಿ ವಿ.ಐ.ಪಿ. ಸೂಟ್ ಸಂಖ್ಯೆ –1;

ಸಾರ್ವಜನಿಕ ಭೇಟಿ ಸಮಯ: ಬೆಳಿಗ್ಗೆ 10 ರಿಂದ 11 ಗಂಟೆ.

* ಪೊಲೀಸ್ ವೀಕ್ಷಕರ ನೇಮಕ:

01–ಚಿಕ್ಕೋಡಿ ಲೋಕಸಭಾ,

02–ಬೆಳಗಾವಿ ಮತ್ತು ಕ್ಷೇತ್ರಗಳಿಗೆ ಪೊಲೀಸ್ ವೀಕ್ಷಕರಾಗಿ ಹಿರಿಯ ಐಪಿಎಸ್ ಅಧಿಕಾರಿ ಪವನಕುಮಾರ್, ಮೊಬೈಲ್ ಸಂಖ್ಯೆ–8123241395; ಬೆಳಗಾವಿ ಪಿಡಬ್ಲ್ಯುಡಿ ಹೊಸ ಐ.ಬಿ. ಕೊಠಡಿ ಸಂಖ್ಯೆ –4;

ಸಾರ್ವಜನಿಕ ಭೇಟಿ ಸಮಯ: ಬೆಳಿಗ್ಗೆ 10 ರಿಂದ 11 ಗಂಟೆ.

ಲೋಕಸಭಾ ಚುನಾವಣೆಗೆ ಸಂಬಂಧಿಸಿದಂತೆ ಸಾರ್ವಜನಿಕರು ನಿಗದಿತ ಸಮಯ ಹಾಗೂ ಸ್ಥಳದಲ್ಲಿ ಸಾಮಾನ್ಯ ವೀಕ್ಷಕರು ಮತ್ತು ಪೊಲೀಸ್ ವೀಕ್ಷಕರನ್ನು ಭೇಟಿ ಮಾಡಬಹುದು ಎಂದು ಜಿಲ್ಲಾ ಚುನಾವಣಾಧಿಕಾರಿ ನಿತೇಶ್ ಪಾಟೀಲ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.